**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**24.04.2026 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಒಳ ಮೀಸಲಾತಿ ಹಂಚಿಕೆ ಕುರಿತಂತೆ ಸರ್ಕಾರ ಮಹತ್ವದ ನಿರ್ಣಯ ; ಎಡಗೈ ಹಾಗೂ ಬಲಗೈ ಸಮುದಾಯಕ್ಕೆ ತಲಾ ಶೇಕಡ ೫.೨೫, ಇತರರಿಗೆ ಶೇಕಡ ೪.೫ರಷ್ಟು ಹಂಚಿಕೆ**

**೨. ಸರ್ಕಾರ ಪರಿಶಿಷ್ಟರಿಗೆ ಒಳಮೀಸಲಾತಿ ನೀಡುವ ಬದಲು ಗೊಂದಲ ಸೃಷ್ಟಿಸಿದೆ - ಸಂಸದ ಗೋವಿಂದ ಕಾರಜೋಳ ಆರೋಪ**

**೩. ಇಂಜಿನಿಯರಿಂಗ್ ಶುಲ್ಕ ಏರಿಕೆ ಬಗ್ಗೆ ಅಂತಿಮ ನಿರ್ಧಾರ ಕೈಗೊಂಡಿಲ್ಲ ; ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಸ್ಪಷ್ಟನೆ**

**೪. ರಾಜ್ಯದ ಆರ್ಥಿಕತೆ ದುರ್ಬಲಗೊಳಿಸಿದ ಗ್ಯಾರಂಟಿ ಯೋಜನೆಗಳು - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಳವಳ**

**೫. ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯಕ್ಕೆ ಕ್ಷಣಗಣನೆ ; ಕ್ರೀಡಾಂಗಣದ ಸುತ್ತಮುತ್ತ ಬಿಗಿ ಭದ್ರತೆ**

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಂಪುಟ ಸಭೆಯಲ್ಲಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಬಗ್ಗೆ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಈ ಮೂಲಕ ಹಲವು ವರ್ಷಗಳಿಂದ ಇದ್ದ ಗೊಂದಲಕ್ಕೆ ಸರ್ಕಾರ ತೆರೆ ಎಳೆದಿದೆ. ಪರಿಶಿಷ್ಟ ಜಾತಿಗಳಿಗೆ ಲಭ್ಯವಿರುವ ಶೇಕಡ ೧೫ರಷ್ಟು ಮೀಸಲಾತಿಯಲ್ಲಿ ಪರಿಶಿಷ್ಟ ಎಡಗೈ ಸಮುದಾಯಕ್ಕೆ ಶೇಕಡ ೫.೨೫, ಬಲಗೈ ಸಮುದಾಯಕ್ಕೆ ಶೇಕಡ ೫.೨೫ ಇತರರಿಗೆ ಶೇಕಡ ೪.೫ರಷ್ಟು ಹಂಚಿಕೆ ಮಾಡಲು ನಿರ್ಧರಿಸಲಾಗಿದೆ. ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ತೀರ್ಮಾನಕ್ಕೆ ವಿಶೇಷ ಸಂಪುಟ ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿಗೆ ದೊರೆತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನ್ಯಾಯಾಲಯ ಮುಂದಿನ ಆದೇಶದವರೆಗೆ ಇದೇ ಅನುಪಾತ ಅನ್ವಯವಾಗಲಿದ್ದು, ನೇಮಕಾತಿ ವೇಳೆ ಪ್ರವರ್ಗ ಎ-೫.೨೫, ಬಿ-೫.೨೫, ಸಿ-೪.೫

ಮೀಸಲಾತಿಯೊಂದಿಗೆ ಅಧಿಸೂಚನೆಯನ್ನು ಮತ್ತೊಮ್ಮೆ ಪ್ರಕಟಿಸಲಾಗುವುದು ಎಂದು ತಿಳಿಸಿದ್ದಾರೆ. ಬಜೆಟ್‌ನಲ್ಲಿ ಘೋಷಿಸಿರುವ ೫೬ ಸಾವಿರದ ೪೩೨ ಹುದ್ದೆಗಳ ಭರ್ತಿ ವೇಳೆ ಈ ಮೀಸಲಾತಿ ಅನ್ವಯವಾಗಲಿದೆ ಎಂದು ಹೇಳಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ**

ಖಾಲಿಯಿರುವ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ. ಎಲ್ಲರನ್ನೂ ವಿಶ್ವಾಸಕ್ಕೆ ಪಡೆದು ಈ ನಿರ್ಧಾರ ತೆಗೆದುಕೊಳ್ಳಲಾಗಿದ್ದು, ಸಂಘಟನೆಗಳು ಈ ನಿರ್ಧಾರವನ್ನು ಒಪ್ಪಿಕೊಳ್ಳುವ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಸರ್ಕಾರ ಪರಿಶಿಷ್ಟರಿಗೆ ಒಳಮೀಸಲಾತಿ ನೀಡುವ ಬದಲು ಗೊಂದಲ ಸೃಷ್ಟಿಸಿದೆ ಎಂದು ಸಂಸದ ಗೋವಿಂದ ಕಾರಜೋಳ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಸಮುದಾಯಗಳ ನಡುವೆ ಭಿನ್ನಾಭಿಪ್ರಾಯದ ಬೀಜಗಳನ್ನು ಬಿತ್ತುತ್ತಿದೆ ಎಂದು ದೂರಿದ್ದಾರೆ. ಎಲ್ಲಾ ಸಮುದಾಯಗಳಿಗೆ ನ್ಯಾಯ ಒದಗಿಸದಿದ್ದರೆ ಮೀಸಲಾತಿಗಾಗಿ ಕಳೆದ ಮೂರು ದಶಕಗಳಿಂದ ಹೋರಾಡುತ್ತಿರುವ ಸಮುದಾಯಗಳು ಬೀದಿಗಿಳಿಯಲಿವೆ ಎಂದು ಎಚ್ಚರಿಕೆ ನೀಡಿದ್ದಾರೆ. ಸುಪ್ರೀಂಕೋರ್ಟ್ ನಿರ್ದೇಶನ ಹಾಗೂ ಸಾಂವಿಧಾನಿಕ ಮೌಲ್ಯಗಳಿಗೆ ಅನುಗುಣವಾಗಿ ೧೦೧ ಸಮುದಾಯಗಳಿಗೆ ಜಾರಿಗೆ ತರುವಂತೆ ಅವರು ಆಗ್ರಹಿಸಿದ್ದಾರೆ.

**<><*<><>*><>**

ಕೃಷಿ ಕ್ಷೇತ್ರದಲ್ಲಿನ ಹೊಸ ಬದಲಾವಣೆಗಳು ಪ್ರತಿ ರೈತರನ್ನೂ ತಲುಪಬೇಕು. ಈ ದಿಸೆಯಲ್ಲಿ ಎಫ್‌ಕೆಸಿಸಿಐ ಪ್ರಯತ್ನ ಶ್ಲಾಘನೀಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ ಆಯೋಜಿಸಿದ್ದ "ಗ್ಲೋಬಲ್ ಅಗ್ರಿಟೆಕ್ ಸಮ್ಮಿಟ್-೨೦೨೬"ನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂತಹ ಕಾರ್ಯಕ್ರಮಗಳಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತಾಗಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಕೃಷಿ ಲಾಭದಾಯಕವಾದರೆ ಯುವಜನತೆ ಸಹಜವಾಗಿ ಕೃಷಿಯತ್ತ ಮುಖ ಮಾಡಲಿದ್ದಾರೆ. ಸರ್ಕಾರ ಕೃಷಿಯನ್ನು ಲಾಭದಾಯಕಗೊಳಿಸಲು ಹಲವು ಯೋಜನೆಗಳನ್ನು ರೂಪಿಸಿದ್ದು, ಕೈಗಾರಿಕೆಗಳೂ ಕೈಜೋಡಿಸಬೇಕು ಎಂದು ತಿಳಿಸಿದ್ದಾರೆ. ಮಾಹಿತಿ ತಂತ್ರಜ್ಞಾನದಲ್ಲಿ ಬೆಂಗಳೂರು

ರಾಜಧಾನಿಯಾದಂತೆ, ಕೃಷಿ ತಂತ್ರಜ್ಞಾನದಲ್ಲಿಯೂ ಬೆಂಗಳೂರು ರಾಜಧಾನಿಯಾಗಬೇಕು. ರಾಜ್ಯದ ಸಮಗ್ರ ಅಭಿವೃದ್ಧಿಗಾಗಿ ಕೃತಕ ಬುದ್ದಿಮತ್ತೆ ಸೇರಿದಂತೆ ಎಲ್ಲ ಕ್ಷೇತ್ರಗಳ ತಂತ್ರಜ್ಞಾನವನ್ನು ಬಳಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಎಂಜಿನಿಯರಿಂಗ್ ಶುಲ್ಕ ಏರಿಕೆ ಬಗ್ಗೆ ಅಂತಿಮ ನಿರ್ಧಾರ ಕೈಗೊಂಡಿಲ್ಲ ಎಂದು ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಸ್ಪಷ್ಟಪಡಿಸಿದ್ದಾರೆ. ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳು ಶೇಕಡ ೧೦ರಷ್ಟು ಶುಲ್ಕ ಹೆಚ್ಚಳಕ್ಕೆ ಮನವಿ ಮಾಡಿದ್ದು, ಇನ್ನು ಯಾವುದೇ ಅಂತಿಮ ನಿರ್ಧಾರ ತೆಗೆದುಕೊಂಡಿಲ್ಲ ಎಂದು ತಿಳಿಸಿದ್ದಾರೆ. ಕೆಲವು ಕಾಲೇಜುಗಳು ನಿಗದಿತ ಪಠ್ಯಕ್ರಮ ಶುಲ್ಕಕ್ಕಿಂತ ಹೆಚ್ಚು ಹಣ ವಸೂಲಿ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿ ಬಂದಿದ್ದು, ಕಠಿಣಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಇದೇ ವೇಳೆ ಸಿಇಟಿ ಪರೀಕ್ಷಾ ಕೇಂದ್ರದಲ್ಲಿ ಜನಿವಾರ ತೆಗೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬ್ಬಂದಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯ ಸರ್ಕಾರದ ಖಾತರಿ ಯೋಜನೆಗಳು ರಾಜ್ಯದ ಆರ್ಥಿಕತೆಯನ್ನು ದುರ್ಬಲಗೊಳಿಸಿವೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಮೈಸೂರಿನಲ್ಲಿಂದು ಮಾತನಾಡಿದ ಅವರು, ಕರ್ನಾಟಕ ಮುಂಬರುವ ದಿನಗಳಲ್ಲಿ ಶ್ರೀಲಂಕಾದಂತಹ ಪರಿಸ್ಥಿತಿ ಎದುರಿಸಬಹುದು ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಮಹಿಳೆಯರಿಗೆ ೨ ಸಾವಿರ ರೂಪಾಯಿ ನೀಡುವುದು ಪ್ರಯೋಜಕಾರಿಯಾಗಿ ಕಾಣಬಹುದು. ಆದರೆ ಸರ್ಕಾರವು ಹೇಗೆ ಹಣಕಾಸು ಒದಗಿಸುತ್ತಿದೆ ಎಂಬುದನ್ನು ಜನರು ಪರಿಶೀಲಿಸಬೇಕು ಎಂದು ತಿಳಿಸಿದ್ದಾರೆ. ಗ್ಯಾರಂಟಿ ಯೋಜನೆಗಳಿಗೆ ಹಣಕಾಸು ಒದಗಿಸಲು ಸರ್ಕಾರ ದೊಡ್ಡ ಪ್ರಮಾಣದಲ್ಲಿ ಸಾಲ ಮಾಡುತ್ತಿದೆ. ಪರಿಣಾಮ ರಾಜ್ಯದ ಖಜಾನೆ ಖಾಲಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸರ್ಕಾರ ತನ್ನ ಉದ್ಯೋಗಿಗಳಿಗೆ ಸಮಯಕ್ಕೆ ಸರಿಯಾಗಿ ವೇತನ ನೀಡಲು ಪರದಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

<><*<><>*><>

ಖಾಯಂ ಬೋಧಕರ ಕೊರತೆ ಎದುರಿಸುತ್ತಿರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಪಿಎಚ್‌ಡಿ ಮಾರ್ಗದರ್ಶಕರಾಗಿ ಪ್ರಥಮ ದರ್ಜೆ ಕಾಲೇಜುಗಳ ಹಿರಿಯ ಪ್ರಾಧ್ಯಾಪಕರ ಸೇವೆ ಬಳಸಿಕೊಳ್ಳಲು

ಅವಕಾಶ ಕಲ್ಪಿಸುವಂತೆ ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಉಪಸಭಾಪತಿ ಪುಟ್ಟಣ್ಣ ಸರ್ಕಾರವನ್ನು ಆಗ್ರಹಿಸಿದ್ದಾರೆ. ಜ್ಞಾನಜ್ಯೋತಿ ಸಭಾಂಗಣದಲ್ಲಿ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು ವಿಶ್ವವಿದ್ಯಾಲಯದ ಸಹಯೋಗದಲ್ಲಿ ಆಯೋಜಿಸಲಾಗಿರುವ ಕರ್ನಾಟಕ ಇತಿಹಾಸ ಪರಿಷತ್ತಿನ ೩೯ನೇ ವಾರ್ಷಿಕ ಮಹಾಧಿವೇಶನ ಉದ್ಘಾಟಿಸಿದ ಅವರು, ಸಮಾಜದ ಸರ್ವತೋಮುಖ ಪ್ರಗತಿಗೆ ಪೂರಕವಾಗಿ ಉನ್ನತ ಶಿಕ್ಷಣ ಹಂತದಲ್ಲಿ ಇತಿಹಾಸವೂ ಸೇರಿದಂತೆ ಮಾನವಿಕ ಶಾಸ್ತ್ರಗಳ ಅಧ್ಯಯನ ಮತ್ತು ಸಂಶೋಧನೆಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕೆಂದು ಒತ್ತಾಯಿಸಿದ್ದಾರೆ. ಆಶಯ ಭಾಷಣ ಮಾಡಿದ ನವದೆಹಲಿಯ ಜವಹರಲಾಲ್ ನೆಹರು ವಿಶ್ವವಿದ್ಯಾಲಯದ ವಿಶ್ರಾಂತ ಇತಿಹಾಸ ಪ್ರಾಧ್ಯಾಪಕರಾದ ಪ್ರೊ.ಜಾನಕಿ ನಾಯರ್ ಕರ್ನಾಟಕ ಜ್ಞಾನ ಭಂಡಾರ ಅಭಿವೃದ್ಧಿಪಡಿಸುವಂತೆ ಸಲಹೆ ನೀಡಿದ್ದಾರೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ. ಪುರುಷೋತ್ತಮ ಬಿಳಿಮಲೆ "ಉನ್ನತ ಶಿಕ್ಷಣದ ಸವಾಲುಗಳು ಮತ್ತು ಸಾಧ್ಯತೆಗಳು" ಎಂಬ ವಿಷಯದ ಕುರಿತು ಪ್ರಧಾನ ಉಪನ್ಯಾಸ ನೀಡಿದರು.

**<><*<><>*><>**

ಕನ್ನಡದ ವರನಟ ಡಾ.ರಾಜಕುಮಾರ್ ಅವರ ೯೭ನೇ ಜನ್ಮದಿನಾಚರಣೆಯನ್ನು ರಾಜ್ಯಾದ್ಯಂತ ಇಂದು ಆಚರಿಸಲಾಯಿತು. ನಟನೆಯ ಮೂಲಕ ಜೀವನ ಮೌಲ್ಯಗಳನ್ನು ಬೋಧಿಸಿದ ವರನಟ ಡಾ.ರಾಜಕುಮಾರ್ ಕನ್ನಡದ ಶ್ರೇಷ್ಠ ರತ್ನ ಎಂದು ವಿಜಯಪುರ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅಭಿಪ್ರಾಯಪಟ್ಟಿದ್ದಾರೆ. ಕನ್ನಡ ನಾಡು-ನುಡಿ ಹಾಗೂ ಸಿನಿಮಾ ರಂಗದಲ್ಲಿ ಅಪಾರವಾದ ಸೇವೆ ಸಲ್ಲಿಸಿದ ಡಾ.ರಾಜ್ ಕುಮಾರ್ ಕನ್ನಡದ ಅಸ್ಮಿತೆಯಾಗಿದ್ದಾರೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಪ್ರಕಾಶ್ ರಾಜ್ ಮೇಹು ಬಣ್ಣಿಸಿದ್ದಾರೆ. ಚಾಮರಾಜನಗರದ ವರನಟ ಡಾ.ರಾಜ್ ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ನಡೆದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ೧೨ನೇ ಶತಮಾನದ ಬಸವಣ್ಣನಂತೆ ೨೧ನೇ ಶತಮಾನಕ್ಕೆ ರಾಜಣ್ಣ ಎಂದು ಅಭಿಪ್ರಾಯಪಟ್ಟಿದ್ದಾರೆ. ಡಾ.ರಾಜ್‌ಕುಮಾರ್ ರಂಗಕಲೆ ಮತ್ತು ಚಿತ್ರರಂಗದಲ್ಲಿ ಮಾಡಿದ ಸಾಧನೆ ಇಂದಿನ ಪೀಳಿಗೆಗೆ ಮಾದರಿ ಎಂದು ವಿಜಯನಗರ ಅಪರ ಜಿಲ್ಲಾಧಿಕಾರಿ ಈ ಬಾಲಕೃಷ್ಣ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದಲೂ ವರನಟ, ಪದ್ಮಭೂಷಣ ಡಾ.ರಾಜ್‌ಕುಮಾರ್ ಅವರ ೯೭ನೇ ಜನ್ಮ ದಿನಾಚರಣೆ ಆಚರಿಸಲಾಯಿತು. ಡಾ.ರಾಜ್‌ಕುಮಾರ್ ಅವರ ಸಂದೇಶಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್.ಆರ್ ಕರೆ ನೀಡಿದ್ದಾರೆ. ಡಾ. ರಾಜ್‌ಕುಮಾರ್ ಅವರ ವ್ಯಕ್ತಿತ್ವ, ಮೌಲ್ಯಗಳು ಮತ್ತು

ಸಮಾಜದ ಮೇಲಿನ ಬದ್ಧತೆ ಇಂದಿನ ಯುವಪೀಳಿಗೆಗೆ ದಾರಿ ತೋರಿಸಲು ಸಹಕಾರಿಯಾಗಿದೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದ್ದಾರೆ.

**<><*<><>*><>**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಗುಜರಾತ್ ಟೈಟಾನ್ಸ್ ನಡುವೆ ಐಪಿಎಲ್ ಟಿ-೨೦ ಪಂದ್ಯ ನಡೆಯಲಿದ್ದು, ಕ್ಷಣಗಣನೆ ಆರಂಭವಾಗಿದೆ. ಈ ಆವೃತ್ತಿಯಲ್ಲಿ ಆರ್‌ಸಿಬಿ ಬೆಂಗಳೂರಿನಲ್ಲಿ ಆಡುವ ಕೊನೆಯ ಲೀಗ್ ಪಂದ್ಯ ಇದಾಗಿದೆ.  ಪಂದ್ಯದ ಹಿನ್ನೆಲೆಯಲ್ಲಿ ಬೆಂಗಳೂರು ಸಂಚಾರಿ ಪೊಲೀಸರು ಕ್ರೀಡಾಂಗಣ ಸುತ್ತಮುತ್ತ ಸಂಚಾರ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿದ್ದು, ನಗರದಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ಕಳೆದ ಪಂದ್ಯಗಳ ವೇಳೆ ಟಿಕೆಟ್‌ಗಳು ಕಾಳಸಂತೆಯಲ್ಲಿ ಮಾರಾಟವಾಗಿದ್ದ ಹಿನ್ನೆಲೆಯಲ್ಲಿ ಸಿಸಿಬಿ ಪೊಲೀಸರು ಇಂದು ಟಿಕೆಟ್ ಅಕ್ರಮ ಮಾರಾಟಗಾರರ ಮೇಲೆ ನಿಗಾ ಇರಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**